ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಮೈಸೂರು ಅರಮನೆ ಸಂರಕ್ಷಣೆ

ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1283 (1446) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ಅರಮನೆ ಶಿಥಿಲಗೊಂಡಿದ್ದು, ಅಲ್ಲಲ್ಲಿ ಸೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ದುರಸ್ತಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ವಿಶ್ವವಿಖ್ಯಾತ ದಸರಾ ನೋಡಲು ಸಾವಿರಾರು ಜನರು ಮೈಸೂರಿಗೆ ಬರುತ್ತಿದ್ದು, ಅರಮನೆಗೂ ಜನ ಭೇಟಿ ನೀಡುತ್ತಿರುವುದರಿಂದ ಇದರ ಸಂರಕ್ಷಣೆಗೆ ಸರ್ಕಾರದಿಂದ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?